**ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಪ್ರತಾಪ್‌ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) ರವರು ನಿಯಮ 330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ**

**ವಿಷಯ:**

ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ 2017ರ ಪೂರ್ವದ ಭೂಪರಿವರ್ತಿತ ಹಾಗೂ ನಮೂನೆ–3ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕ್ಕಾಗಿ ಕಟ್ಟಡ ಪರವಾನಗಿ ದೊರೆಯದೆ ಮತ್ತು ಈಗಾಗಲೇ ವಾಸವಿರುವ ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯದೆ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಲಾಗಿದೆ.

**ಉತ್ತರ:**

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ಪಟ್ಟಣ ಪಂಚಾಯಿತಿಗೆ ಸಂಬಂಧಿಸಿದಂತೆ ಮಹಾಯೋಜನೆಯ ಕರಡು ಪ್ರತಿಯನ್ನು ತಾತ್ಕಾಲಿಕ ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸುವ ಹಂತದಲ್ಲಿರುತ್ತದೆ.

ಭೂ ಪರಿವರ್ತಿಸಿದ/ ಭೂ ಪರಿವರ್ತಿಸದ ಜಮೀನುಗಳಿಗೆ ವಿನ್ಯಾಸ ಅನುಮೋದನೆ ಪಡೆಯದೇ ಅನಧಿಕೃತ ಬಡಾವಣೆಗಳನ್ನು ನಿರ್ಮಾಣ ಮಾಡಿ ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸುವುದರಿಂದ ನಗರ ಪ್ರದೇಶಗಳಲ್ಲಿ ಉದ್ಯಾನವನ/ಬಯಲು ಜಾಗೆಗಳ ಕೊರತೆ, ನಾಗರಿಕ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ವಿಫಲತೆ, ವ್ಯವಸ್ಥಿತವಾದ ರಸ್ತೆಯ ಪರಿಚಲನೆ, ಮೂಲಭೂತ ಸೌಕರ್ಯದ ಕೊರತೆ ಹಾಗೂ ಯೋಜಿತ ಬೆಳವಣಿಗೆಗಳಲ್ಲಿ ತೊಡಕುಗಳಿರುವುದು ಕಂಡುಬರುತ್ತದೆ. ಇಂತಹ ಬೆಳವಣಿಗೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಇನ್ನು ಮುಂದೆ ವಿನ್ಯಾಸಗಳಿಗೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯದಿರುವ ನಿವೇಶನಗಳಿಗೆ ಖಾತೆ ನೀಡಬಾರದೆಂದು ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 7 ಟಿಟಿಪಿ 2017, ದಿನಾಂಕ: 22–03–2017ರಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಲಾಗಿರುತ್ತದೆ.

ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಸುತ್ತೋಲೆ ಸಂಖ್ಯೆ: ನಗ್ರಾಯೋನಿ:ಕಟ್ಟಡ ಪರವಾನಿಗೆ:ಸುತ್ತೋಲೆ:2015–16 ದಿನಾಂಕ: 22–01–2016ರಲ್ಲಿ ಸಕ್ಷಮ ಪ್ರಾಧಿಕಾರದಿಂದ ವಿನ್ಯಾಸ ಅನುಮೋದನೆಯಾಗದೆ ಇರುವಂತಹ ನಿವೇಶನಗಳಲ್ಲಿ ಕಟ್ಟಡ ನಿರ್ಮಿಸಲು ಯೋಜನಾ ಪ್ರಾಧಿಕಾರಗಳಿಂದ ತಾಂತ್ರಿಕ ಅಭಿಪ್ರಾಯ ನೀಡಬಾರದೆಂದು ತಿಳಿಸಲಾಗಿರುತ್ತದೆ. ಮುಂದುವರೆದು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಸುತ್ತೋಲೆ ಸಂಖ್ಯೆ: ನಗ್ರಾಯೋನಿ:ಕಟ್ಟಡ ಪರವಾನಿಗೆ:ಸುತ್ತೋಲೆ:2015–16 ದಿನಾಂಕ: 04–05–2017ರಲ್ಲಿ ದಿನಾಂಕ: 08–12–1976ರ ಪೂರ್ವದಲ್ಲಿ ಭೂಪರಿವರ್ತನೆಯಾಗದ ನಿವೇಶನಗಳಿಗೆ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿದ್ದರೂ ನಿಯಮಾನುಸಾರ ಭೂ ಪರಿವರ್ತನೆ ಆದೇಶವನ್ನು ಕಂದಾಯ ಇಲಾಖೆಯಿಂದ ಪಡೆದುಕೊಂಡು ಕಟ್ಟಡ ಪರವಾನಿಗೆ ನೀಡಲು ತಾಂತ್ರಿಕ ಅಭಿಪ್ರಾಯ ನೀಡಬಹುದಾಗಿರುತ್ತದೆ ಎಂದು ತಿಳಿಸಲಾಗಿದೆ.

ಅದರಂತೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾಗಿರುವ ಬಡಾವಣೆಗಳಲ್ಲಿನ ನಿವೇಶನಗಳಿಗೆ ಸಂಬಂಧಿಸಿದ ಯೋಜನಾ ಪ್ರಾಧಿಕಾರವು ತಾಂತ್ರಿಕ ಅಭಿಪ್ರಾಯ ನೀಡಿದ್ದಲ್ಲಿ ಕಟ್ಟಡ ನಿರ್ಮಾಣ ಮಾಡಲು ಅನುಮತಿ ನೀಡಲು ನಗರ ಸ್ಥಳೀಯ ಸಂಸ್ಥೆಗಳಿಂದ ನಿಯಮಾನುಸಾರ ಕ್ರಮವಹಿಸಲಾಗುತ್ತದೆ.

**ಸಂಖ್ಯೆ: ನಅಇ 38 ಜಿಇಎಲ್ 2024**(ಇ)

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು